ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಹೊಸ ಕಟ್ಟಡದ ಛಾವಣಿ ಕುಸಿತದ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)

4 (92) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಸರ್ಕಾರಿ ಮೆಡಿಕಲ್ ಕಾಲೇಜಿನ ಭೋದಕ ಆಸ್ಪತ್ರೆಯ ಹೊಸ ಕಟ್ಟಡದ ಛಾವಣಿ ಇತರೆ ಕಡೆಗಳಲ್ಲಿ ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸ್ಪಷ್ಟ ಮಾಹಿತಿ ನೀಡುವುದು ;

(ಆ) 2017ರ ಆಗಸ್ಟ್‌ನಲ್ಲಿ ಉದ್ಘಾಟನೆಗೊಂಡ ಆಸ್ಪತ್ರೆಯ ಹೊಸ ಕಟ್ಟಡದ ಛಾವಣಿ ಕುಸಿತಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ಕಟ್ಟಡ ನಿರ್ಮಾಣದಲ್ಲಿ ಕಳಪೆ ಕಾಮಗಾರಿಯನ್ನು ನಿರ್ವಹಿಸಿರುವುದರಿಂದ ಈ ರೀತಿ ಛಾವಣಿ ಇತರೆ ಕಡೆಗಳಲ್ಲಿ ಕುಸಿಯಲು ಕಾರಣವಾಗಿರುವುದು ಕಂಡುಬಂದಿದ್ದು, ಇದನ್ನು ನಿರ್ವಹಿಸಿದ ಇಂಜಿನಿಯರ್/ಗುತ್ತಿಗೆದಾರರ ವಿರುದ್ಧ ಇಲ್ಲಿಯವರೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)